ಜಾರಕಿಹೊಳಿ ಮತ್ತು ಹಳೆವೆಂಟಮೂರಿ ಗ್ರಾಮಗಳಿಗೆ ವಾಹನ ಸಂಚಾರಕ್ಕೆ ಯೋಗ್ಯವಾದ ಮಾರ್ಗ ಇಲ್ಲದ್ದರಿಂದ ಸಾರಿಗೆ ಸೌಲಭ್ಯವನ್ನು ಒದಗಿಸಲಾಗಿರುವುದಿಲ್ಲ. ಶಾಲಾ ಮಕ್ಕಳಿಗಾಗಿ ಶಾಲಾ ಸಮಯಕ್ಕೆ ಅನುಗುಣವಾಗಿ ಸಾರಿಗೆ ಸೌಲಭ್ಯವನ್ನು ಒದಗಿಸಲಾಗಿದೆ.

ಊ. ಜನದಟ್ಟಣೆ ಹೆಚ್ಚಿರುವ ಮಾರ್ಗಗಳನ್ನು ಗುರುತಿಸಿ, ಈಗಾಗಲೇ ಅಂತಹ ಮಾರ್ಗಗಳಲ್ಲಿ ಬಸ್ ಟ್ರಿಪ್‌ಗಳನ್ನು ಹೆಚ್ಚಿಸುವುದರೊಂದಿಗೆ ಎಲ್ಲಾ ಗ್ರಾಮೀಣ ಪ್ರದೇಶದ ಮಾರ್ಗಗಳಲ್ಲಿ ಸರಿಯಾದ ಕಾರ್ಯಾಚರಣೆ ಮಾಡಲಾಗುತ್ತಿದೆ. ಕೆಲವು ಮಾರ್ಗಗಳಲ್ಲಿ ರಸ್ತೆ ತುಂಬಾ ಕೆಟ್ಟಿರುವುದರಿಂದ, ಸಂಚಾರ ಕಾರ್ಯಾಚರಣೆಗೆ ಅಡಚಣೆಯಾಗಿರುತ್ತದೆ. ರಸ್ತೆ ಅಭಿವೃದ್ಧಿಯಾದಂತೆ ಸಾರಿಗೆಗಳನ್ನು ಸಮಯಕ್ಕೆ ಸರಿಯಾಗಿ ಕಾರ್ಯಾಚರಣೆಗೊಳಿಸಲು ಕ್ರಮ ಕೈಗೊಳ್ಳಲಾಗುತ್ತದೆ.

256 (442) ಶ್ರೀ ಶಿವಾನಂದ ಎಸ್.ಪಾಟೀಲ್ (ಬಸವನಬಾಗೇವಾಡಿ) ಶ್ರೀ ಹೆಚ್.ಡಿ.ಕುಮಾರಸ್ವಾಮಿ (ಮುಖ್ಯ ಮಂತ್ರಿಗಳು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ಮಲಘಾಣ 33/11 ಕೆ.ವಿ. ವಿದ್ಯುತ್ ವಿತರಣಾ ಕೇಂದ್ರವನ್ನು 110/11 ಕೆ.ವಿ ವಿದ್ಯುತ್ ವಿತರಣಾ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಬಂದಿದೆಯೇ;

ಆ. ಬಸವನ ಬಾಗೇವಾಡಿ ತಾಲ್ಲೂಕಿನ ಮಲಘಾಣದಲ್ಲಿ ಹಾಲಿ ಇರುವ 33/11 ಕೆ.ವಿ.ಕೇಂದ್ರದ ಮೇಲೆ ಹೆಚ್ಚಿನ ವಿದ್ಯುತ್ ಭಾರ ಇದ್ದು ಪದೇ ಪದೇ ಲೋಡ್ ಶೆಡ್ಡಿಂಗ್ ಆಗುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದರಿಂದ ಇದರ ಸಾಮರ್ಥ್ಯವನ್ನು 110/11 ಕೆ.ವಿ.ಗೆ ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

ಇ. ಯಾವ ನಿರ್ದಿಷ್ಟ ಕಾಲಮಿತಿ ಒಳಪಡಿಸಿ ಮೇಲ್ದರ್ಜೆಗೇರಿಸಲಾಗುವುದು?

ಶ್ರೀ ಹೆಚ್.ಡಿ.ಕುಮಾರಸ್ವಾಮಿ (ಮುಖ್ಯ ಮಂತ್ರಿಗಳು)

ಅ. ಹೌದು, ಇವೆ.

ಆ. ಬಸವನ ಬಾಗೇವಾಡಿ ತಾಲ್ಲೂಕಿನ ಮಲಘಾಣದಲ್ಲಿ ಹಾಲಿ ಇರುವ 33/11 ಕೆ.ವಿ. ವಿದ್ಯುತ್ ಉಪ-ಕೇಂದ್ರವನ್ನು 110/11 ಕ.ವಿ ವಿದ್ಯುತ್ ಉಪ-ಕೇಂದ್ರವನ್ನಾಗಿ ಮೇಲ್ದರ್ಜೆಗೊಳಿಸುವ ಪ್ರಸ್ತಾವನೆಗೆ ಕೆ.ವಿ.ಪ್ರ.ನಿ.ನಿ.ಯ ತಾಂತ್ರಿಕ ಸಲಹಾ ಸಮಿತಿಯು ತನ್ನ ಅನುಮೋದನೆಯನ್ನು ಅಕ್ಟೋಬರ್-2005 ರಲ್ಲಿ

ನೀಡಿರುತ್ತದೆ. ಈ ವಿದ್ಯುತ್ ಉಪ–ಕೇಂದ್ರಕ್ಕೆ ಸಂಬಂಧಿಸಿದ 110 ಕೆ.ವಿ.ವಿದ್ಯುತ್ ಪ್ರಸರಣ ಮಾರ್ಗದ ಸರ್ವೇ ಕಾರ್ಯಗಳು ಮುಗಿದಿದೆ. ವಿದ್ಯುತ್ ಉಪ–ಕೇಂದ್ರದ ನಿರ್ಮಾಣಕ್ಕೆ ಬೇಕಾಗಿರುವ ಭೂಮಿಯು ಲಭ್ಯವಿರುತ್ತದೆ. ಆಡಳಿತಾತ್ಮಕ ಮಂಜೂರಾತಿ ನೀಡಲು ಕಾಮಗಾರಿಯ ವಿವರವಾದ ಯೋಜನಾ ವರದಿಯನ್ನು ಸಿದ್ಧಪಡಿಸಲಾಗುತ್ತಿದೆ.

ಇ. ಆಡಳಿತಾತ್ಮಕ ಮಂಜೂರಾತಿ ಆದ ನಂತರ, ಕಾಮಗಾರಿಯನ್ನು 'ಟರ್ನ್‌ಕೀ' ಆಧಾರದಲ್ಲಿ ನಿರ್ವಹಿಸಲು ಟೆಂಡರ್‌ಗಳನ್ನು ಆದಷ್ಟು ಶೀಘ್ರರೀತಿಯಲ್ಲಿ ಆಹ್ವಾನಿಸಲಾಗುವುದು. ಟೆಂಡರಿಂಗ್ ಪ್ರಕ್ರಿಯೆ ಪೂರ್ಣಗೊಂಡು ಗುತ್ತಿಪಡಿಸಲಾಗುವ ಗುತ್ತಿಗೆದಾರರಿಗೆ ಕಾಮಗಾರಿಯನ್ನು ವಹಿಸಿಕೊಟ್ಟ ದಿನಾಂಕದಿಂದ 7 ತಿಂಗಳ ಕಾಲಾವಧಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿ ಮೇಲ್ದರ್ಜೆಗೊಳಿಸಲು ಉದ್ದೇಶಿಸಲಾಗಿದೆ.

257 (443) ಶ್ರೀ ಶಿವಾನಂದ ಎಸ್.ಪಾಟೀಲ್ (ಬಸವನಬಾಗೇವಾಡಿ) ಶ್ರೀ ಹೆಚ್.ಡಿ.ಕುಮಾರಸ್ವಾಮಿ (ಮುಖ್ಯ ಮಂತ್ರಿಗಳು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರು.

ಅ. ಬಿಜಾಪುರ ತಾಲ್ಲೂಕು ಜೈನಾಪುರ ಹಾಗೂ ಅದರ ಸುತ್ತಮುತ್ತಲಿನ ಹಳ್ಳಿಗಳು ಹಾಗೂ ಪುನರ್ ವಸತಿ ಕೇಂದ್ರಗಳಲ್ಲಿ ವಿದ್ಯುತ್ತಿನ ತೀವ್ರ ಅಭಾವ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಇಲ್ಲಿ ಹೊಸದಾಗಿ 33/11 ಕೆ.ವಿ. ಸಾಮರ್ಥ್ಯವನ್ನು ಹೊಂದಿರುವ ವಿದ್ಯುತ್ ವಿತಾರಣಾ ಕೇಂದ್ರ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ. ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು;

ಈ. ಹೊಸ 33/11 ಕೆ.ವಿ ವಿದ್ಯುತ್ ವಿತರಣಾ ಕೇಂದ್ರ ಸ್ಥಾಪಿಸುವ ಬಗ್ಗೆ ಸರ್ಕಾರ ಯಾವ ಕಾಲಮಿತಿ ಸೂಚಿಸಿ ಕೆಲಸ ಪ್ರಾರಂಭಿಸಲಾಗುವುದು?

ಶ್ರೀ ಹೆಚ್.ಡಿ.ಕುಮಾರಸ್ವಾಮಿ (ಮುಖ್ಯ ಮಂತ್ರಿಗಳು)

ಅ. ಬಿಜಾಪುರ ತಾಲ್ಲೂಕು, ಜೈನಾಪುರ ಮತ್ತು ಸುತ್ತಮುತ್ತಲಿನ ಪ್ರದೇಶಗಳಿಗೆ ಹಾಗೂ ಪುನರ್ ವಸತಿ ಕೇಂದ್ರಗಳಿಗೆ ದೇವರಗೆಣ್ಣೂರಿನಲ್ಲಿರುವ 33 ಕೆ.ವಿ ವಿದ್ಯುತ್ ಉಪ ಕೇಂದ್ರದಿಂದ ಪ್ರತ್ಯೇಕವಾದ 11 ಕೆ.ವಿ. ಫೀಡರ್ ಮೂಲಕವೇ ವಿದ್ಯುತ್ ಸರಬರಾಜಾಗುತ್ತಿದೆ. ಅಲ್ಲದೇ, ದೇವರಗೆಣ್ಣೂರು 33 ಕೆ.ವಿ ವಿದ್ಯುತ್ ಉಪ ಕೇಂದ್ರವು ಜೈನಾಪುರಕ್ಕೆ ಕೇವಲ 6 ಕಿ.ಮೀ. ಅಂತರದಲ್ಲಿದೆ. ಆದುದರಿಂದ, ಜೈನಾಪುರ ಹಾಗೂ ಅದರ ಸುತ್ತಮುತ್ತಲಿನ ಹಳ್ಳಿಗಳು ಮತ್ತು ಪುನರ್ ವಸತಿ ಕೇಂದ್ರಗಳಿಗೆ ಆದಷ್ಟು ಸಮರ್ಪಕ ರೀತಿಯಲ್ಲಿ ವಿದ್ಯುತ್